# ಕರ್ನಾಟಕ ವಿಧಾನ ಪರಿಷತ್

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 667

ಉತ್ತರ ದಿನಾಂಕ : 25.09.2020

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಾವಣಗೆರೆ ಜಿಲ್ಲೆಯ ನೀರು ಸರಬರಾಜು ಯೋಜನೆಯಲ್ಲಿ ರೂ.47.55ಕೋಟಿ ರೂಗಳ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅವ್ಯವಹಾರದಲ್ಲಿ ಭಾಗಿಯಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ; | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ದಾವಣಗೆರೆ ವ್ಯಾಪ್ತಿಯಲ್ಲಿ ನೀರು ಸರಬರಾಜು ಯೋಜನೆಯಲ್ಲಿ ರೂ.47.55ಕೋಟಿ ಅವ್ಯವಹಾರ ನಡೆದಿರುವ ಬಗ್ಗೆ ಯಾವುದೇ ಪ್ರಕರಣ ಇರುವುದಿಲ್ಲ. |
| ಆ) | ದಾವಣಗೆರೆ ಜಿಲ್ಲೆಯ ಹಿಂದುಳಿದ ಬರಗಾಲ ಪೀಡಿತ ಜನರಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸಲು ವಿಫಲವಾಗಿರುವ ಪಂಚಾಯತ್ ರಾಜ ಇಂಜಿನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಮೇಲೆ ಕೈಗೊಂಡ ಕ್ರಮಗಳೇನು; ಸರ್ಕಾರದ ಹಣವನ್ನು ಪೋಲು ಮಾಡಿರುವ ಅಧಿಕಾರಿಯನ್ನು ಅಮಾನತ್ತು ಮಾಡಿ ಯಾವಾಗ ವಿಚಾರಣೆ ನಡೆಸಲಾಗುವುದು; | ಅನ್ವಯಿಸುವುದಿಲ್ಲ |
| ಇ) | ರಾಜ್ಯದ ತೆರಿಗೆಯ ಹಣವನ್ನು ಪೋಲು ಮಾಡಿರುವ ದಾವಣಗೆರೆ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಿ ನಿಷ್ಫಲ ವೆಚ್ಚವಾದ ಸಂಪೂರ್ಣ ಮೊತ್ತವನ್ನು ಅವರಿಂದ ವಸೂಲಿ ಮಾಡಿ ಸರ್ಕಾರಕ್ಕೆ ಜಮಾ ಮಾಡಲು ಯಾವು ಕ್ರಮ ಕೈಗೊಳ್ಳಲಾಗಿದೆ; ಇಲ್ಲವಾದಲ್ಲಿ ಎಂದು ಕ್ರಮ ಕೈಗೊಳ್ಳಲಾಗುವುದು? | ಅನ್ವಯಿಸುವುದಿಲ್ಲ |

ಸಂ:ಗ್ರಾಕುನೀ&ನೈಇ 45 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು